# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : 15 (127) |
| ಸದಸ್ಯರ ಹೆಸರು | : ಡಾ|| ಚಂದ್ರಶೇಖರ್ ಬಸವರಾಜ ಪಾಟೀಲ್ (ಪದವೀಧರರ ಕ್ಷೇತ್ರ) |
| ಉತ್ತರಿಸುವ ದಿನಾಂಕ | : 08-12-2025 |
| ಉತ್ತರಿಸುವ ಸಚಿವರು | : ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಸರ್ಕಾರಿ ಪದವಿ ಪೂರ್ವ ಕಾಲೇಜಿನ ಉಪನ್ಯಾಸಕರುಗಳು ಇದುವರೆಗೆ ಪಿ.ಯು.ಸಿ ಪ್ರಥಮ ಮತ್ತು ದ್ವಿತೀಯ ದರ್ಜೆ ವಿದ್ಯಾರ್ಥಿಗಳಿಗೆ ಮಾತ್ರ ಪಾಠ ಮಾಡುತ್ತಿದ್ದು, ಸರ್ಕಾರದ ಹೊಸ ಆದೇಶದನ್ವಯ 9ನೇ ಮತ್ತು 10ನೇ ತರಗತಿಯ ವಿದ್ಯಾರ್ಥಿಗಳಿಗೆ ಪಾಠ ಮಾಡಬೇಕೆಂದು ಆದೇಶ ಮಾಡಿರುತ್ತಾರೆಯೇ: | ಸರ್ಕಾರಿ ಪದವಿ ಪೂರ್ವ ಕಾಲೇಜಿನ ಉಪನ್ಯಾಸಕರುಗಳಿಗೆ 9ನೇ ಮತ್ತು 10ನೇ ತರಗತಿಯ ವಿದ್ಯಾರ್ಥಿಗಳಿಗೆ ಪಾಠ ಮಾಡಬೇಕೆಂಬುದರ ಬಗ್ಗೆ ಪರಿಶೀಲನೆಯಲ್ಲಿದ್ದು, ಇನ್ನು ಅಂತಹ ಯಾವುದೇ ಆದೇಶವನ್ನು ಹೊರಡಿಸಿರುವುದಿಲ್ಲ. |
| (ಆ) | ರಾಜ್ಯದ ಎಲ್ಲಾ ಉಪನ್ಯಾಸಕರುಗಳು ವಿರೋದ ವ್ಯಕ್ತ ಪಡಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | ಕರ್ನಾಟಕ ರಾಜ್ಯ ಪದವಿ ಪೂರ್ವ ಕಾಲೇಜಿನ ಉಪನ್ಯಾಸಕರ ಸಂಘವು ಈ ಕುರಿತು ಪ್ರತಿಭಟನೆ ನಡೆಸಿರುವುದು ಅವರು ಸಲ್ಲಿಸಿದ ಮನವಿಯ ಆಧಾರದ ಮೇಲೆ ಕಂಡು ಬಂದಿರುತ್ತದೆ. |
| ಇ) | ಬಂದಿದ್ದರೆ, ಅದನ್ನು ಯಾವ ಕಾಲಮಿತಿಯೊಳಗೆ ಬಗೆಹರಿಸಲಾಗುವುದು? | ಸರ್ಕಾರಿ ಪದವಿ ಪೂರ್ವ ಕಾಲೇಜಿನ ಉಪನ್ಯಾಸಕರುಗಳಿಗೆ 9ನೇ ಮತ್ತು 10ನೇ ತರಗತಿಯ ವಿದ್ಯಾರ್ಥಿಗಳಿಗೆ ಪಾಠ ಮಾಡಬೇಕೆಂಬುದರ ಬಗ್ಗೆ ಪರಿಶೀಲನಾ ಹಂತದಲ್ಲಿದ್ದು. ಈ ಬಗ್ಗೆ ಸಾಧಕ ಬಾಧಕಗಳ ಕುರಿತು ಕೂಲಂಕುಷವಾಗಿ ಪರಿಶೀಲಿಸಿ ಕ್ರಮವಹಿಸಲಾಗುವುದು. ಅವರ ಕುಂದುಕೊರತೆಗಳ ಬಗ್ಗೆ ಆಲಿಸಲಾಗುತ್ತಿದೆ. ಈ ಕುರಿತು ಯಾವುದೇ ಆದೇಶ ಹೊರಡಿಸದೇ ಇರುವುದರಿಂದ ಸಮಸ್ಯೆ ಬಗೆಹರಿಸುವ ಪ್ರಶ್ನೆ ಉದ್ಭವಿಸುವುದಿಲ್ಲ. |

ಸಂಖ್ಯೆ: ಇಪಿ 383 ಡಿಜಿಡಬ್ಲೂ 2025

(ಎಸ್. ಮಧು ಬಂಗಾರಪ್ಪ)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು